ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಪಿ.ಡಿ.ಓ ಹುದ್ದೆಯನ್ನು ಗ್ರೂಪ್ `ಬಿ' ಗೆ ಮೇಲ್ದರ್ಜೆಗೇರಿಸುವ ಬಗ್ಗೆ

ಶ್ರೀ ಕೆ. ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):-

345 (348) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಹುದ್ದೆಯನ್ನು ಗ್ರೂಪ್ `ಬಿ' ಹುದ್ದೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಈ ಪ್ರಸ್ತಾವನೆಯನ್ನು 6ನೇ ವೇತನ ಆಯೋಗದ ಮುಂದೆ ತಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) 6ನೇ ವೇತನ ಆಯೋಗವು ತನ್ನ 2ನೇ ವರದಿ ನೀಡಿದ್ದು, ಈ ಬಗ್ಗೆ ತಿಳಿಸಿರುವ ಅಭಿಪ್ರಾಯವೇನು ;

(ಈ) ಪಿ.ಡಿ.ಓ ಹುದ್ದೆಯನ್ನು `ಬಿ' ವೃಂದಕ್ಕೇರಿಸಲು ಸರ್ಕಾರದ ಒಟ್ಟಾರೆ ನಿಲುವೇನು ?